157 ಶೇ೬ (65)
4RK
060226

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ರಮೇಶ್ ಬಾಬು ಇವರ ನಿಯಮ 330 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.**

*****

**ವಿಷಯ :**

ಕರ್ನಾಟಕದ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ಜಾತಿ ಮತ್ತು ಹಿಂದುಳಿದ ಸಮುದಾಯಗಳಿಗೆ ಶೇಕಡ 33 ರಷ್ಟು ಮೀಸಲಾತಿಯನ್ನು ನೀಡಲಾಗಿದೆ. ಕರ್ನಾಟಕದಲ್ಲಿ ಸುಮಾರು 802 ಇತರೆ ಹಿಂದುಳಿದ ಸಮುದಾಯಗಳು ಮತ್ತು ಜಾತಿಗಳು ಗುರುತಿಸಲ್ಪಟ್ಟಿರುತ್ತವೆ. ಈ ಜಾತಿಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿಯ ಪ್ರಮಾಣ ಹೆಚ್ಚಾಗಬೇಕಾಗಿರುತ್ತದೆ. ಅದೇ ಸಂದರ್ಭದಲ್ಲಿ ವಿಧಾನಸಭೆ ಮತ್ತು ಲೋಕಸಭೆಗೆ ಹಿಂದುಳಿದ ಜಾತಿಗಳಿಗೆ ಮೀಸಲಾತಿಯ ಸೌಕರ್ಯ ನೀಡಬೇಕಾಗಿರುತ್ತದೆ. ಕೇಂದ್ರ ಸರ್ಕಾರವು ಇದಕ್ಕೆ ಪೂರಕವಾಗಿ ಸಂವಿಧಾನಕ್ಕೆ ತಿದ್ದುಪಡಿ ಮಾಡಬೇಕಾಗಿರುತ್ತದೆ. ಕರ್ನಾಟಕ ವಿಧಾನಸಭೆಯು ಕೇಂದ್ರ ಸರ್ಕಾರವು ಮೀಸಲಾತಿ ಪ್ರಮಾಣ ಹೆಚ್ಚಿಸಲು ಒತ್ತಾಯಿಸಿ ಅಧಿವೇಶನದಲ್ಲಿ ಗೊತ್ತುವಳಿಯನ್ನು ಅಂಗೀಕರಿಸಬೇಕಾಗಿರುತ್ತದೆ. ಕರ್ನಾಟಕದ ಹಿಂದುಳಿದ ಜಾತಿಗಳ ಆಯೋಗವು ಎಂಪಾರಿಕಲ್ ಅಂಕಿ ಅಂಶಗಳನ್ನು ಸಂಗ್ರಹ ಮಾಡಿರುವುದರಿಂದ ಮೀಸಲಾತಿಗೆ ಪೂರಕವಾಗಿ ಕೇಂದ್ರ ಸರ್ಕಾರ ತಿದ್ದುಪಡಿಯನ್ನು ಮಾಡಬೇಕಾಗಿರುತ್ತದೆ ಮತ್ತು ಹಿಂದುಳಿದ ಜಾತಿಗಳಿಗೆ ಕರ್ನಾಟಕದಲ್ಲಿ ಮೀಸಲಾತಿಯ ಪ್ರಮಾಣವನ್ನು ಹೆಚ್ಚು ಮಾಡಬೇಕಾಗಿರುತ್ತದೆ. ಕರ್ನಾಟಕದಲ್ಲಿ ಹಿಂದುಳಿದ ಜಾತಿ ಮತ್ತು ಸಮುದಾಯಗಳನ್ನು ಐದು ವರ್ಗೀಕರಣ ಮಾಡಲಾಗಿದ್ದು ಅವುಗಳಲ್ಲಿ ಕೆಟಗರಿ 1, 2ಎ, 2ಬಿ, 3ಎ ಮತ್ತು 3 ಬಿ ಎಂದು ವರ್ಗೀಕರಣ ಮಾಡಲಾಗಿರುತ್ತದೆ. ಈ ವರ್ಗೀಕರಣಕ್ಕೆ ಪೂರಕವಾಗಿ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪ್ರಮಾಣವನ್ನು ರಾಜ್ಯದಲ್ಲಿ ಹೆಚ್ಚು ಮಾಡಬೇಕಾಗಿರುತ್ತದೆ. ಮೀಸಲಾತಿ ಪ್ರಮಾಣ ಹೆಚ್ಚುವರಿ ಮಾಡಲು ಮತ್ತು ಈ ಸಂಬಂಧ ವಿಧಾನಸಭೆಯಲ್ಲಿ ಗೊತ್ತುವಳಿಯನ್ನು ಅಂಗೀಕರಿಸಲು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಲ್ಲಿ ಪ್ರಸ್ತಾಪಿಸಲು ಬಯಸಲಾಗಿದೆ.

**ಉತ್ತರ :**

ಮಂಡಲ್ ವರದಿಗೆ ಸಂಬಂಧಿಸಿದಂತೆ ಭಾರತದ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಇಂದಿರಾ ಸಾಹ್ನಿ ಪ್ರಕರಣದ ರಿಟ್ ಅರ್ಜಿ ಸಂಖ್ಯೆ: 438/94 ರ ಮಧ್ಯಂತರ ಆದೇಶದಲ್ಲಿ ಯಾವುದೇ ಸಂದರ್ಭದಲ್ಲಿಯೂ ಒಟ್ಟಾರೆ ಮೀಸಲಾತಿ ಪ್ರಮಾಣವು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳು ಸೇರಿದಂತೆ) ಶೇಕಡ 50% ಕ್ಕೆ ಮೀರಬಾರದೆಂದು ಮಧ್ಯಂತರ ಆದೇಶ ನೀಡಿರುತ್ತದೆ. ಈ ಆದೇಶದನ್ವಯ ಮಾನ್ಯ ಘನ ಸರ್ವೋಚ್ಚ ನ್ಯಾಯಾಲಯವು ದಿನಾಂಕ:16.11.1992 ರಲ್ಲಿ ನೀಡಿರುವ ತೀರ್ಪಿನಂತೆ ಪ್ರತಿಯೊಂದು ರಾಜ್ಯದಲ್ಲೂ ಶಾಶ್ವತವಾಗಿ ಹಿಂದುಳಿದ ವರ್ಗಗಳ ಆಯೋಗ ರಚನೆಯಾಗಬೇಕು ಎಂಬುದಾಗಿ ಆದೇಶಿಸಿದೆ. ಅದಕ್ಕನುಗುಣವಾಗಿ ಕರ್ನಾಟಕದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1995 ರಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್.ಡಬ್ಲ್ಯೂ.ಡಿ 164 ಬಿಸಿಎ 97 ದಿನಾಂಕ:29.11.1997 ರನ್ವಯ ದಿನಾಂಕ: 01.12.1997ರಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಜಾರಿಗೆ ಬಂದಿರುತ್ತದೆ. ಸದರಿ ಅಧಿನಿಯಮದ ಕಲಂ 9 ರ ಅಡಿಯಲ್ಲಿ ಆಯೋಗದ ಪ್ರಕಾರ್ಯಗಳ ಬಗ್ಗೆ ನಮೂದಿಸಿದ್ದು, ಅದರಂತೆ ಆಯೋಗವು ಕಾರ್ಯನಿರ್ವಹಿಸುತ್ತಿದೆ.

ಸರ್ಕಾರದಿಂದ ರಚಿತಗೊಂಡ ಈ ಹಿಂದಿನ ಹಿಂದುಳಿದ ವರ್ಗಗಳ ಆಯೋಗಗಳು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995ರ ಕಲಂ 9(1) ರಡಿಯಲ್ಲಿ ಹಿಂದುಳಿದ ವರ್ಗಗಳನ್ನು ಗುರುತಿಸಲು ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ಆರ್ಥಿಕ ಅಂಶಗಳ ಮೇಲೆ ವಿವಿಧ ಮಾನದಂಡಗಳನ್ನು ರೂಪಿಸಿ, ಹಿಂದುಳಿದ ವರ್ಗಗಳ ಪಟ್ಟಿಯ ವಿವಿಧ ಪ್ರವರ್ಗಗಳಿಗೆ ಸೇರಿಸುವಂತೆ ಸಲಹೆ/ಶಿಫಾರಸ್ಸನ್ನು ಕಾಲಕಾಲಕ್ಕೆ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಅದರಂತೆ, ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಸೌಲಭ್ಯ ಹಾಗೂ ಸರ್ಕಾರದಿಂದ ದೊರೆಯುವ ಸೌಲಭ್ಯಗಳು ಕಾಲಕಾಲಕ್ಕೆ ಯಾವುದೇ ಅಡೆತಡೆಯಿಲ್ಲದೇ ದೊರಕಿಸಿಕೊಟ್ಟು ಸಾಮಾಜಿಕ ನ್ಯಾಯವನ್ನು ಕಲ್ಪಿಸಲಾಗುತ್ತಿದೆ.

ಪ್ರಸ್ತುತ ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ಬೆಂಗಳೂರು ದಿನಾಂಕ:30.03.2002 ಆದೇಶದ ಪ್ರಕಾರ ಜಾತಿಗಳನ್ನು ವಿವಿಧ ಪ್ರವರ್ಗದಡಿ ವರ್ಗೀಕರಿಸಿ ಮೀಸಲಾತಿ ನೀಡಿದ ವಿವರ ಈ ಕೆಳಕಂಡಂತಿರುತ್ತದೆ.

| ಪ್ರವರ್ಗ | ಜಾತಿಗಳ ಸಂಖ್ಯೆ | ಮೀಸಲಾತಿ ಪ್ರಮಾಣ (ಶೇಕಡವಾರು) |
|---|---|---|
| ಪ್ರವರ್ಗ-I | 389 | 4 |
| ಪ್ರವರ್ಗ-II (ಎ) | 393 | 15 |
| ಪ್ರವರ್ಗ-II (ಬಿ) | 01 | 4 |
| ಪ್ರವರ್ಗ-III (ಎ) | 50 | 4 |
| ಪ್ರವರ್ಗ-III (ಬಿ) | 48 | 5 |
| ಒಟ್ಟು | 881 | 32 |

**ಸಂಖ್ಯೆ: ಹಿಂವಕ 454 ಬಿಸಿಎ 2025**

**( ಶಿವರಾಜ ಎಸ್. ತಂಗಡಗಿ )**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.